Akashvani : Bangalore
National Bulletins In Kannada
11.10.2025 : 7.35AM

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**ಮುಖ್ಯಾಂಶಗಳು:**

1. ನವದೆಹಲಿಯಲ್ಲಿಂದು ಕೃಷಿ ಮತ್ತು ಸಂಬಂಧಿತ ವಲಯಗಳ ೪೨ ಸಾವಿರ ಕೋಟಿ ರೂಪಾಯಿ ಮೊತ್ತದ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ
2. ಹಬ್ಬದ ಋತುವಿನಲ್ಲಿ ವಿಮಾನ ದರಗಳನ್ನು ಸೂಕ್ತ ಮಟ್ಟದಲ್ಲಿಡುವಂತೆ ವಿಮಾನಯಾನ ಸಂಸ್ಥೆಗಳಿಗೆ ಸಚಿವ ಕೆ. ರಾಮ್‌ಮೋಹನ್ ನಾಯ್ಡು ಕರೆ
3. ದೇಶದ ಮೊದಲ ಮಾನಸಿಕ ಆರೋಗ್ಯ ರಾಯಭಾರಿಯಾಗಿ ನಟಿ ದೀಪಿಕಾ ಪಡುಕೋಣೆ ನೇಮಕ
4. ಭಾರತ - ವೆಸ್ಟ್ ಇಂಡೀಸ್ ಟೆಸ್ಟ್ ಕ್ರಿಕೆಟ್ ಸರಣಿ; ಇಂದು ಎರಡನೇ ಪಂದ್ಯದ ಮೊದಲ ಇನ್ನಿಂಗ್ಸ್ ಮುಂದುವರಿಸಲಿರುವ ಭಾರತ

**********

ನವದೆಹಲಿಯಲ್ಲಿಂದು ಪ್ರಧಾನಮಂತ್ರಿ ನರೇಂದ್ರ ಮೋದಿ, ೪೨ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೊತ್ತದ ಕೃಷಿ ಮತ್ತು ಸಂಬಂಧಿತ ವಲಯಗಳಲ್ಲಿನ ಹಲವು ಯೋಜನೆ ಹಾಗೂ ಉಪಕ್ರಮಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ೨೪ ಸಾವಿರ ಕೋಟಿ ರೂಪಾಯಿ ಅನುದಾನದೊಂದಿಗೆ ಪಿಎಂ-ಧನಧಾನ್ಯ ಯೋಜನೆ ಮತ್ತು ೧೧ ಸಾವಿರ ಕೋಟಿ ರೂಪಾಯಿಗೂ ಅಧಿಕ ಅನುದಾನದೊಂದಿಗೆ ಬೇಳೆ ಕಾಳು ಉತ್ಪಾದನೆಯಲ್ಲಿ ಸ್ವಾವಲಂಬನೆ ಯೋಜನೆಗಳಿಗೆ ಇಂದು ಚಾಲನೆ ನೀಡಲಿದ್ದಾರೆ. ಕಡಿಮೆ ಉತ್ಪಾದಕತೆ ಇರುವ ೧೦೦ ಜಿಲ್ಲೆಗಳಲ್ಲಿ ಪಿಎಂ ಧನಧಾನ್ಯ ಕೃಷಿ ಯೋಜನೆಯಡಿ ರೈತರ ಆದಾಯ ಗಮನಾರ್ಹವಾಗಿ ಹೆಚ್ಚಿಸುವಂತೆ ಸಮಗ್ರ ಕೃಷಿ ಅಭಿವೃದ್ಧಿ ಕೈಗೊಳ್ಳಲಾಗುವುದು. ಹೊಲಗಳಿಗೆ ನೀರಾವರಿ ಸೌಲಭ್ಯ, ಸಾಲಸೌಲಭ್ಯ ಹಾಗೂ ದಾಸ್ತಾನು ಮೂಲಸೌಕರ್ಯ ಖಾತರಿ ಪಡಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ತೊಗರಿ ಬೇಳೆ, ಉದ್ದಿನ ಬೇಳೆ ಹಾಗೂ ಮಸೂರ್ ದಾಲ್‌ಗಳಂತಹ ಪ್ರಮುಖ ದ್ವಿದಳ ಧಾನ್ಯಗಳ ಉತ್ಪಾದನೆಯನ್ನು ಹೆಚ್ಚಿಸುವುದು ದ್ವಿದಳ ಧಾನ್ಯ ಮಿಷನ್‌ನ ಉದ್ದೇಶವಾಗಿದೆ. ಈ ಯೋಜನೆಯಡಿ ನೋಂದಾಯಿತ ರೈತರ ಉತ್ಪನ್ನಗಳನ್ನು ಪೂರ್ಣ ಪ್ರಮಾಣದಲ್ಲಿ ಕನಿಷ್ಠ ಬೆಂಬಲ ಬೆಲೆ  ನೀಡುವ ಕೇಂದ್ರೀಯ ಸಂಸ್ಥೆಗಳು ಖರೀದಿಸಲಿವೆ.  ಬೆಳೆ ಕ್ಷೇತ್ರ ವಿಸ್ತರಣೆ, ಉತ್ಪಾದಕತೆಯಲ್ಲಿ ಸುಧಾರಣೆ ಮೂಲಕ ದ್ವಿದಳ ಧಾನ್ಯಗಳ ಉತ್ಪಾದನೆಯಲ್ಲಿ ಸ್ವಾವಲಂಬನೆ ಸಾಧಿಸುವುದು ಯೋಜನೆಗಳ ಉದ್ದೇಶವಾಗಿದೆ ಎಂದು ಕೃಷಿ ಸಚಿವಾಲಯ ತಿಳಿಸಿದೆ.  ಕೃಷಿ ಕ್ಷೇತ್ರಕ್ಕೆ ಅಮೂಲ್ಯ ಕೊಡುಗೆ ನೀಡಿದ ರೈತರು, ರೈತ ಉತ್ಪನ್ನ ಸಂಘಟನೆಗಳು, ಸಹಕಾರಿ ಸಂಘಗಳ ಧುರೀಣರನ್ನು ಪ್ರಧಾನಮಂತ್ರಿ ಸನ್ಮಾನಿಸಲಿದ್ದಾರೆ.  ಇದೇ ಸಂದರ್ಭದಲ್ಲಿ ಪ್ರಧಾನಿ ಅವರು, ೫ ಸಾವಿರದ ೪೫೦ ಕೋಟಿ ರೂಪಾಯಿ ಮೊತ್ತದ ಕೃಷಿ , ಪಶು ಸಂಗೋಪನೆ, ಮೀನುಗಾರಿಕೆ ಮತ್ತು ಆಹಾರ ಸಂಸ್ಕರಣೆ ಕ್ಷೇತ್ರಗಳಿಗೆ ಸಂಬಂಧಿಸಿದ ಒಂದು ಸಾವಿರದ ಒಂದು ನೂರಕ್ಕೂ ಹೆಚ್ಚು ಯೋಜನೆಗಳ ಶಿಲಾನ್ಯಾಸ ಹಾಗೂ ಉದ್ಘಾಟನೆ ನೆರವೇರಿಸಲಿದ್ದಾರೆ.

**********

ರಾಷ್ಟ್ರಪತಿ ದ್ರೌಪದಿ ಮುರ್ಮು ನಿನ್ನೆ ಗುಜರಾತ್‌ನ ಜುನಾಗಢ್ ಜಿಲ್ಲೆಯಲ್ಲಿ ಆಫ್ರಿಕನ್ ಮೂಲ ಹೊಂದಿರುವ ಪ್ರಾಚೀನ ಬುಡಕಟ್ಟು ಗುಂಪಾದ ಸಿದ್ದಿ ಸಮುದಾಯದ ಸದಸ್ಯರೊಂದಿಗೆ ಸಂವಾದ ನಡೆಸಿದರು. ಈ ವೇಳೆ ರಾಷ್ಟ್ರಪತಿ, ಶಿಕ್ಷಣವನ್ನು ಸಬಲೀಕರಣ ಮತ್ತು ಪ್ರಗತಿಯ ಸಾಧನವಾಗಿ ತೆಗೆದುಕೊಳ್ಳುವಂತೆ ಬುಡಕಟ್ಟು ಸಮುದಾಯಕ್ಕೆ ಕರೆ ನೀಡಿದ್ದಾರೆ. ವಿಶೇಷವಾಗಿ ದುರ್ಬಲ ಬುಡಕಟ್ಟು ಗುಂಪಾದ ಸಿದ್ದಿ ಸಮುದಾಯ, ಶೇಕಡ ೭೨ಕ್ಕಿಂತ ಹೆಚ್ಚು ಸಾಕ್ಷರತಾ ಪ್ರಮಾಣವನ್ನು ಸಾಧಿಸಿದೆ ಎಂದು ಹರ್ಷ ವ್ಯಕ್ತಪಡಿಸಿದರು. ಬುಡಕಟ್ಟು ಜನರ ಕಲ್ಯಾಣಕ್ಕೆ ಕೇಂದ್ರ ಸರ್ಕಾರ ಬದ್ಧವಾಗಿದ್ದು, ಜಾರಿಗೊಳಿಸಲಾಗುವ ವಿವಿಧ ಅಭಿವೃದ್ಧಿ ಮತ್ತು ಕಲ್ಯಾಣ ಯೋಜನೆಗಳ ಕುರಿತು ಜಾಗೃತರಾಗಿರುವಂತೆ ತಿಳಿಸಿದರು. ಬುಡಕಟ್ಟು ಸಮುದಾಯದ ಪರಿಸರಸ್ನೇಹಿ ಜೀವನಶೈಲಿಯನ್ನು ಸ್ವಾಗತಿಸಿದ ರಾಷ್ಟ್ರಪತಿ, ಇದು ಸುಸ್ಥಿರ ಜೀವನಕ್ಕೆ ಸ್ಫೂರ್ತಿಯ ಮೂಲವಾಗಿದೆ ಎಂದು ಹೇಳಿದರು.

**********

ಮುಂಬರುವ ಹಬ್ಬದ ಋತುವಿನಲ್ಲಿ ವಿವಿಧ ವಲಯಗಳಲ್ಲಿ ವಿಮಾನ ದರಗಳನ್ನು ಸೂಕ್ತ ಮಟ್ಟದಲ್ಲಿ ಕಾಯ್ದುಕೊಳ್ಳುವಂತೆ ನಾಗರಿಕ ವಿಮಾನಯಾನ ಸಚಿವ ಕೆ. ರಾಮಮೋಹನ್ ನಾಯ್ಡು, ವಿಮಾನಯಾನ ಸಂಸ್ಥೆಗಳನ್ನು ಆಗ್ರಹಿಸಿದ್ದಾರೆ. ಪ್ರಯಾಣಿಕರ ಅನುಕೂಲವು ತಮ್ಮ ಪ್ರಮುಖ ಆದ್ಯತೆಯಾಗಿದೆ ಎಂದು ವಿಮಾನಯಾನ ಸಂಸ್ಥೆಗಳು ಭರವಸೆ ನೀಡಿವೆ ಮತ್ತು ಹಬ್ಬದ ಬೇಡಿಕೆಯನ್ನು ಪೂರೈಸಲು ಹೆಚ್ಚಿನ ದಟ್ಟಣೆಯ ಮಾರ್ಗಗಳಲ್ಲಿ ಹೆಚ್ಚುವರಿ ವಿಮಾನ ಸೇವೆಗಳನ್ನು ನಿಯೋಜಿಸಲಾಗಿದೆ ಎಂದು ತಿಳಿಸಿವೆ. ನವದೆಹಲಿಯಲ್ಲಿ ನಿನ್ನೆ ನಡೆದ ಮಾಸಿಕ ಪರಿಶೀಲನಾ ಸಭೆಯನ್ನುದ್ದೇಶಿಸಿ ಮಾತನಾಡಿದ ಸಚಿವರು, ಸುರಕ್ಷತಾ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಮತ್ತು ಪ್ರಯಾಣಿಕರ ಅನುಕೂಲತೆ ಹಾಗೂ ಸೇವಾ ಗುಣಮಟ್ಟದಲ್ಲಿ ಉತ್ತಮ ಅಭ್ಯಾಸಗಳನ್ನು ಅಳವಡಿಸಿಕೊಳ್ಳುವಂತೆ ವಿಮಾನಯಾನ ಸಂಸ್ಥೆಗಳನ್ನು ಒತ್ತಾಯಿಸಿದರು. ವಿಮಾನ ದರಗಳು ಮತ್ತು ಸುಂಕ ಶ್ರೇಣಿಯ ಕುರಿತು ನಿಗಾವಹಿಸುವಂತೆ ನಾಗರಿಕ ವಿಮಾನಯಾನ ನಿರ್ದೇಶನಾಲಯ ಡಿಜಿಸಿಎಯ ಸುಂಕ ಮೇಲ್ವಿಚಾರಣಾ ಘಟಕಕ್ಕೆ ಸಚಿವರು ನಿರ್ದೇಶನ ನೀಡಿದ್ದಾರೆ.

**********

ಖ್ಯಾತ ನಟಿ ದೀಪಿಕಾ ಪಡುಕೋಣೆ ಅವರನ್ನು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಮೊದಲ ಮಾನಸಿಕ ಆರೋಗ್ಯ ರಾಯಭಾರಿಯಾಗಿ ನೇಮಿಸಲಾಗಿದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ದೀಪಿಕಾ ಈ ಪಾತ್ರವನ್ನು ವಹಿಸಿಕೊಳ್ಳಲು ತಮಗೆ ತುಂಬಾ ಗೌರವವಿದೆ ಎಂದು ತಿಳಿಸಿದ್ದು, ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಭಾರತದ ನಿರಂತರ ಪ್ರಯತ್ನಗಳನ್ನು ಬೆಂಬಲಿಸುವ ಬದ್ಧತೆಯನ್ನು ಒತ್ತಿ ಹೇಳಿದ್ದಾರೆ. ಈ ಸಹಯೋಗದೊಂದಿಗೆ, ನಟಿ ದೇಶದ ಮಾನಸಿಕ ಆರೋಗ್ಯ ಚೌಕಟ್ಟನ್ನು ಬಲಪಡಿಸಲು ಕೊಡುಗೆ ನೀಡುವ ಗುರಿಯನ್ನು ಹೊಂದಿದ್ದಾರೆ, ಈ ಪಾಲುದಾರಿಕೆಯು ದೇಶಾದ್ಯಂತ ಜಾಗೃತಿ ಮೂಡಿಸುವ ಮತ್ತು ಮಾನಸಿಕ ಆರೋಗ್ಯವನ್ನು ಉತ್ತೇಜಿಸುವತ್ತ ಒಂದು ಪ್ರಮುಖ ಹೆಜ್ಜೆಯಾಗಿದೆ ಎಂದು ಸಚಿವಾಲಯ ತಿಳಿಸಿದೆ.

**********

ಪ್ರಾದೇಶಿಕ ದೇಶಗಳಿಂದ ಉಂಟಾಗುವ ಎಲ್ಲಾ ವಿಧದ ಉಗ್ರವಾದಗಳನ್ನು ಭಾರತ ಮತ್ತು ಅಫ್ಘಾನಿಸ್ತಾನ್ ಒಮ್ಮತದಿಂದ ಖಂಡಿಸಿವೆ. ಭಾರತದ ವಿದೇಶಾಂಗ ಖಾತೆ ಸಚಿವ ಡಾ.ಎಸ್. ಜೈಶಂಕರ್ ಹಾಗೂ ಅಫ್ಘಾನಿಸ್ತಾನ ವಿದೇಶಾಂಗ ಖಾತೆ ಸಚಿವ ಮೌಲವಿ ಅಮೀರ್ ಖಾನ್ ಮತ್ತಾಕಿ ನಡುವೆ ನವದೆಹಲಿಯಲ್ಲಿ ನಡೆದ ಮಾತುಕತೆ ನಂತರ ಹೊರಡಿಸಲಾದ ಜಂಟಿ ಹೇಳಿಕೆಯಲ್ಲಿ ಶಾಂತಿ, ಸುಸ್ಥಿರತೆ ಮತ್ತು ಪರಸ್ಪರ ನಂಬಿಕೆಯ ಪ್ರಾಮುಖ್ಯತೆಯನ್ನು ಪ್ರಮುಖವಾಗಿ ಪ್ರಸ್ತಾಪಿಸಲಾಗಿದೆ. ಪ್ರತಿಯೊಂದು ದೇಶ ಮತ್ತು ಮತ್ತೊಂದು ದೇಶದ ಸಾರ್ವಭೌಮತೆ ಮತ್ತು ಪ್ರಾದೇಶಿಕ ಸಮಗ್ರತೆಯನ್ನು ಗೌರವಿಸುವಂತೆ ಹೇಳಿಕೆಯಲ್ಲಿ ತಿಳಿಸಲಾಗಿದೆ. ಸಚಿವ ಡಾ.ಜೈಶಂಕರ್ ಇದೇ ಸಂದರ್ಭದಲ್ಲಿ ಪಹಲ್ಗಾಮ್ ಉಗ್ರಗಾಮಿ ದಾಳಿಯನ್ನು ಬಲವಾಗಿ ಖಂಡಿಸಿದ ಅಫ್ಘಾನಿಸ್ತಾನದ ನಿಲುವಿನ ಬಗ್ಗೆ ಮೆಚ್ಚುಗೆ ವ್ಯಕ್ತ ಪಡಿಸಿದರು. ಈ ವೇಳೆ ಭಾರತ - ಅಫ್ಘಾನಿಸ್ತಾನ ನಡುವೆ ಬಲಗೊಳ್ಳುತ್ತಿರುವ ಸಂಬಂಧಗಳ ಕುರಿತು ಅವರು ಮಾತನಾಡಿದರು.

**********

ಬಿಹಾರದಲ್ಲಿ ವಿಧಾನಸಭಾ ಚುನಾವಣೆಗೆ ಎನ್‌ಡಿಎ ಮೈತ್ರಿಕೂಟದೊಳಗಿನ ಸೀಟು ಹಂಚಿಕೆ ಸಮಸ್ಯೆ, ಸರಣಿ ಮಾತುಕತೆ ಮತ್ತು ಮನವೊಲಿಕೆಯ ನಂತರ ಅಂತ್ಯಗೊಂಡಿದೆ. ಎನ್‌ಡಿಎಯ ಪ್ರಮುಖ ನಾಯಕರು ಸೀಟು ಹಂಚಿಕೆಯ ನಿರ್ಧಾರವನ್ನು ಶೀಘ್ರದಲ್ಲೇ ಪ್ರಕಟಿಸುವ ನಿರೀಕ್ಷೆ ಇದೆ. ನವದೆಹಲಿಯಲ್ಲಿಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅಧ್ಯಕ್ಷತೆಯಲ್ಲಿ ಕಾರ್ಯಕಾರಿ ಸಮಿತಿ ಸಭೆ ನಡೆಯಲಿದೆ. ಬಿಹಾರದಲ್ಲಿ ವಿಧಾನಸಭಾ ಚುನಾವಣೆಗಳು ಎರಡು ಹಂತಗಳಲ್ಲಿ ನಡೆಯುತ್ತಿದ್ದು, ಮೊದಲ ಹಂತದ ಮತದಾನ ನವೆಂಬರ್ ೬ರಂದು ನಡೆಯಲಿದೆ.

**********

ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯವು ರಾಷ್ಟ್ರೀಯ ಹಸಿರು ಹೈಡ್ರೋಜನ್ ಮಿ?ನ್ ಅಡಿಯಲ್ಲಿ ಗುಜರಾತ್‌ನ ದೀನದಯಾಳ್ ಬಂದರು ಪ್ರಾಧಿಕಾರ, ತಮಿಳುನಾಡಿನ ವಿ.ಒ. ಚಿದಂಬರನಾರ್ ಬಂದರು ಪ್ರಾಧಿಕಾರ ಮತ್ತು ಒಡಿಶಾದ ಪ್ಯಾರದೀಪ್ ಬಂದರು ಸೇರಿದಂತೆ ಮೂರು ಪ್ರಮುಖ ಬಂದರುಗಳನ್ನು ಹಸಿರು ಹೈಡ್ರೋಜನ್ ಹಬ್‌ಗಳಾಗಿ ಗುರುತಿಸಿದೆ. ಸಮಗ್ರ ಹೈಡ್ರೋಜನ್ ಪರಿಸರ ವ್ಯವಸ್ಥೆಯನ್ನು ಸೃಷ್ಟಿಸುವ ಮತ್ತು ಶುದ್ಧ ಇಂಧನದತ್ತ ಭಾರತದ ಪರಿವರ್ತನೆಯನ್ನು ಮುನ್ನಡೆಸುವ ನಿಟ್ಟಿನಲ್ಲಿ ಈ ಮಾನ್ಯತೆ ಮಹತ್ವದ ಹೆಜ್ಜೆಯಾಗಿದೆ ಎಂದು ಸಚಿವಾಲಯ ತಿಳಿಸಿದೆ. ಕೇಂದ್ರ

ಬಂದರು, ಹಡಗು ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನೋವಾಲ್, ಈ ಮಾನ್ಯತೆ ಭಾರತದ ಕಡಲ ಪಯಣದಲ್ಲಿ ಒಂದು ನಿರ್ಣಾಯಕ ಕ್ಷಣವಾಗಿದೆ ಎಂದು ಹೇಳಿದ್ದಾರೆ. ಹಸಿರು ಹೈಡ್ರೋಜನ್ ಮತ್ತು ಅದರ ಉತ್ಪನ್ನಗಳ ಉತ್ಪಾದನೆ, ಬಳಕೆ ಮತ್ತು ರಫ್ತಿಗೆ ಭಾರತವನ್ನು ಜಾಗತಿಕ ಕೇಂದ್ರವಾಗಿರಿಸುವ ಗುರಿಯನ್ನು ರಾಷ್ಟ್ರೀಯ ಹಸಿರು ಹೈಡ್ರೋಜನ್ ಮಿಷನ್ ಹೊಂದಿದೆ.

**********

ರಾಷ್ಟ್ರೀಯ ಸ್ವಯಂ ಸೇವಕರ ಸಂಘ - ಆರ್‌ಎಸ್‌ಎಸ್‌ನ ೧೦೦ನೇ ವಾರ್ಷಿಕೋತ್ಸವವನ್ನು ಗುರುತಿಸಲು ಭಾರತ ಸರ್ಕಾರ ವಿಶೇಷ ಸ್ಮರಣಾರ್ಥ ನಾಣ್ಯಗಳು ಮತ್ತು ಅಂಚೆಚೀಟಿಗಳನ್ನು ಬಿಡುಗಡೆ ಮಾಡಿದೆ. ಈ ನಾಣ್ಯಗಳು ಅಧಿಕೃತ ಜಾಲತಾಣ indiagovtmint.in ನಲ್ಲಿ ಕೋಲ್ಕತ್ತಾ ಮಿಂಟ್ ಮೂಲಕ ಆನ್‌ಲೈನ್‌ನಲ್ಲಿ ಖರೀದಿಸಲು ಲಭ್ಯವಿದೆ. ಈ ನಡುವೆ ದೇಶಾದ್ಯಂತದ ಅಂಚೆಚೀಟಿ ಸಂಗ್ರಹಣಾ ಸಂಸ್ಥೆಗಳಲ್ಲಿ ಸ್ಮರಣಾರ್ಥ ಅಂಚೆಚೀಟಿಗಳು ಲಭ್ಯವಿದೆ. ರಾಷ್ಟ್ರೀಯ ಸ್ವಯಂಸೇವಕ ಸಂಘದ ಸೇವೆ, ಏಕತೆ ಮತ್ತು ಸಮರ್ಪಣೆಯ ಶತಮಾನದ ಗೌರವಾರ್ಥವಾಗಿ ನಾಣ್ಯಗಳು ಮತ್ತು ಅಂಚೆಚೀಟಿಗಳನ್ನು ಬಿಡುಗಡೆ ಮಾಡಲಾಗಿದೆ.

**********

ನವದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಎರಡನೇ ಟೆಸ್ಟ್ ಕ್ರಿಕೆಟ್ ಪಂದ್ಯದ ಎರಡನೇ ದಿನವಾದ ಇಂದು ಭಾರತ ವೆಸ್ಟ್ ಇಂಡೀಸ್ ವಿರುದ್ಧ ತನ್ನ ಮೊದಲ ಇನ್ನಿಂಗ್ಸ್‌ಅನ್ನು ಮುಂದುವರಿಸಲಿದೆ. ಪಂದ್ಯ ಬೆಳಗ್ಗೆ ೯.೩೦ಕ್ಕೆ ಆರಂಭವಾಗಲಿದೆ. ನಿನ್ನೆ ದಿನದ ಅಂತ್ಯಕ್ಕೆ ಆರಂಭಿಕ ಬ್ಯಾಟರ್ ಯಶಸ್ವಿ ಜೈಸ್ವಾಲ್ ಅಜೇಯ ೧೭೩ ರನ್ ನೆರವಿನೊಂದಿಗೆ ಭಾರತ ಎರಡು ವಿಕೆಟ್ ನಷ್ಟಕ್ಕೆ ೩೧೮ ರನ್‌ಗಳಿಸಿದೆ. ಅವರೊಂದಿಗೆ ೨೦ ರನ್‌ಗಳಿಸಿರುವ ಶುಭ್‌ಮನ್ ಗಿಲ್ ಕಣದಲ್ಲಿದ್ದಾರೆ. ಇನ್ನಿಂಗ್ಸ್‌ನಲ್ಲಿ ಸಾಯಿ ಸುದರ್ಶನ್ ೮೭ ರನ್ ಹಾಗೂ ಕೆ.ಎಲ್. ರಾಹುಲ್ ೩೮ ರನ್ ಗಳಿಸಿದ್ದಾರೆ. ಈ ಪಂದ್ಯದಲ್ಲಿ ಗೆಲುವು ಸಾಧಿಸುವ ಮೂಲಕ ಭಾರತ ತಂಡ ಸರಣಿ ವಶಪಡಿಸಿಕೊಳ್ಳುವ ಗುರಿಯನ್ನು ಹೊಂದಿದೆ.

*****END*****